

ಅರುಣ ಪಿ. ಭಟ್ಟ

## ವಾರಭವಿಷ್ಯ 5.12.2019ರಿಂದ 11.12.2019




ಹಣಕಾಸಿನ ಹರಿವು ಹೆಚ್ಚಿಸಿಕೊಳ್ಳಲು ಹೊಸ ಆಯ್ಕೆಗಳು ಗೋಚರವಾಗುತ್ತವೆ. ಮನೆಗೆ ಅಗತ್ಯ ಇರುವ ವಸ್ತುಗಳನ್ನು ಖರೀದಿ ಮಾಡುವ ಸಾಧ್ಯತೆ ಇದೆ. ವೈಯಕ್ತಿಕ ಬದುಕಿನಲ್ಲಿ ಸಕಾರಾತ್ಮಕ ಬದಲಾವಣೆಗಳು ಕಾಣಿಸಿಕೊಳ್ಳುತ್ತವೆ.

ಶುಭದಿನ: 8 ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ವೃತ್ತಿಪರರಿಗೆ ಉತ್ತಮವಾದ ಸಮಯ ಇದು. ಸ್ಪರ್ಧಾತ್ಮಕ ಪರೀಕ್ಷೆಗೆ ಸಿದ್ಧತೆ ನಡೆಸುತ್ತಿರುವವರಿಗೆ ಯಶಸ್ಸು ದೊರೆಯಲಿದೆ. ರಾಜಕೀಯ ಕ್ರಿಯಾತ್ಮಕ ಕ್ಷೇತ್ರಗಳಲ್ಲಿ ತೊಡಗಿರುವವರಿಗೆ ಪ್ರಗತಿ. ವೈವಾಹಿಕ ಜೀವನ ಸಂತುಷ್ಟವಾಗಿರುತ್ತದೆ.

ಶುಭದಿನ: 10. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ಉದ್ಯೋಗ ಹುಡುಕುತ್ತಿರುವವರಿಗೆ ಶುಭ ಸುದ್ದಿ. ಸ್ಪರ್ಧೆ, ಕ್ರೀಡೆಗಳಲ್ಲಿ ಯಶಸ್ಸು ದೊರೆಯಲಿದೆ. ಸಾಮಾಜಿಕ ಜೀವನದಲ್ಲಿ ಸಕ್ರಿಯರಾಗಿ ತೊಡಗಿಕೊಳ್ಳಲಿದ್ದೀರಿ. ಸೋದರ ಸೋದರಿಯರ ಜತೆಗೆ ಒತ್ತಡ ಎದುರಿಸಬೇಕಾಗುತ್ತದೆ.

ಶುಭದಿನ: 9. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.




ಕಾನೂನು ವ್ಯಾಜ್ಯಗಳಿದ್ದಲ್ಲಿ ಜಯ. ಪ್ರತಿಸ್ಪರ್ಧಿಗಳ ವಿರುದ್ಧ ನಿಮ್ಮ ಕೈ ಮೇಲಾಗಲಿದೆ. ಉದ್ಯೋಗ ಸ್ಥಳದಲ್ಲಿ ಬಹಳ ಮುಖ್ಯವಾದ ಜವಾಬ್ದಾರಿಯನ್ನು ನಿಮಗೆ ವಹಿಸಲಾಗುವುದು. ಧಾರ್ಮಿಕ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಲಿದ್ದೀರಿ.

ಶುಭದಿನ: 8. ಕಾಲ ಭೈರವನ ಸೇವೆ ಮಾಡಿರಿ.




ವೈವಾಹಿಕ ಜೀವನವು ಸಂತೋಷದಾಯಕವಾಗಿ ಇರುತ್ತದೆ. ಆರೋಗ್ಯವು ಉತ್ತಮವಾಗಿರುತ್ತದೆ. ವಾರದ ಮಧ್ಯ ಭಾಗದಲ್ಲಿ ಮುಖ್ಯವಾದ ಯೋಜನೆಯ ಮೇಲುಸ್ತುವಾರಿ ಸಲುವಾಗಿ ದೂರ ಪ್ರಯಾಣ ಮಾಡಬೇಕಾಗುತ್ತದೆ.

ಶುಭದಿನ: 7. ಈಶ್ವರನಿಗೆ ತಿಲಾರ್ಚನೆ ಮಾಡಿರಿ.




ವಿದೇಶ ವ್ಯವಹಾರ, ಹಣಕಾಸು ಹೂಡಿಕೆಯಲ್ಲಿ ನಿರೀಕ್ಷಿತ ಯಶಸ್ಸು. ಪ್ರತಿಸ್ಪರ್ಧಿಗಳ ವಿರುದ್ಧ ಮೇಲುಗೈ ಸಾಧಿಸಲಿದ್ದೀರಿ. ಆರೋಗ್ಯದಲ್ಲಿ ಸ್ವಲ್ಪ ಮಟ್ಟಿಗೆ ಏರುಪೇರಾಗಲಿದೆ. ಆಹಾರ ನೀರು ಸೇವನೆಯ ಬಗ್ಗೆ ಎಚ್ಚರ ಇರಲಿ.

ಶುಭದಿನ: 9. ಶ್ರೀ ವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ಪ್ರಗತಿ ಪಡೆಯಲಿದ್ದೀರಿ. ಸ್ಪರ್ಧಾತ್ಮಕ, ಕ್ರೀಡಾ ಕ್ಷೇತ್ರದಲ್ಲಿ ತೊಡಗಿಕೊಂಡವರಿಗೆ ಯಶಸ್ಸು ಪಡೆಯುವ ಯೋಗ ಇದೆ. ಆರೋಗ್ಯವು ಉತ್ತಮವಾಗಿ ಇರುವುದರಿಂದ ಉತ್ಸಾಹದಿಂದ ಕಾಣಿಸಿಕೊಳ್ಳದ್ದೀರಿ. ವೈಯಕ್ತಿಕ ಬದುಕು ಸಂತುಷ್ಟವಾಗಿರುತ್ತದೆ.

ಶುಭದಿನ: 8. ಲಿಂಗಾಷ್ಟಕ ಓದಿರಿ.




ವೈಯಕ್ತಿಕ ಬದುಕು ಉತ್ತಮವಾಗಲಿದೆ. ಶಿಕ್ಷಣ ಕ್ಷೇತ್ರದಲ್ಲಿ ಇರುವವರಿಗೆ ಪ್ರಗತಿ ಕಾಣುವ ಸಮಯ. ಗುತ್ತಿಗೆ ಆಧಾರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಸೇವೆ ಕಾಯಂ ಆಗುವ ಸಾಧ್ಯತೆ. ಗೃಹ ನಿರ್ಮಾಣ ವಿಚಾರದಲ್ಲಿ ಪ್ರಗತಿ ಆಗಲಿದೆ.

ಶುಭದಿನ: 9. ಹನುಮಾನ್ ಚಾಲಿಸ್ ಓದಿರಿ.




ಬಡ್ತಿ ದೊರೆಯುವ ಸಮಯ ಇದು. ಸಮಾಜ ಸೇವಾ ಕ್ಷೇತ್ರದಲ್ಲಿ ಇರುವವರಿಗೆ ಮನ್ನಣೆ ಸಿಗಲಿದೆ. ಮನೆಯಲ್ಲಿ ಧಾರ್ಮಿಕ ಕಾರ್ಯಕ್ರಮಗಳನ್ನು ಆಯೋಜನೆ ಸಾಧ್ಯತೆ. ಸಣ್ಣ ಪುಟ್ಟ ಆರೋಗ್ಯ ಸಮಸ್ಯೆಗಳು ಕಾಡಬಹುದು.

ಶುಭದಿನ: 8. ನವದುರ್ಗಾ ಆರಾಧನೆ ಮಾಡಿರಿ.




ಆಸ್ತಿ ವ್ಯವಹಾರಗಳು ನೀವು ಅಂದುಕೊಂಡಂತೆ ನಡೆಯುತ್ತವೆ. ಕಾನೂನು ವ್ಯಾಜ್ಯಗಳಿದ್ದಲ್ಲಿ ಪರಿಹಾರ ದೊರೆಯಲಿದೆ. ವಾರದ ದ್ವಿತೀಯಾರ್ಧದಲ್ಲಿ ಹಲವು ರೀತಿಯಲ್ಲಿ ಅವಕಾಶಗಳು ನಿಮಗೆ ದೊರೆಯಲಿವೆ. ಧಾರ್ಮಿಕ ವಿಚಾರಗಳಿಗೆ ಹೆಚ್ಚು ಸಮಯ.

ಶುಭದಿನ: 10. ಚಂಡಿಪಾರಾಯಣ ಮಾಡಿರಿ.




ಮನೆಯಲ್ಲಿ ಪ್ರಶಾಂತವಾದ ವಾತಾವರಣ. ಪ್ರೀತಿಪಾತ್ರರ ಜತೆಗೆ ಮನರಂಜನೆ ಕಾರ್ಯಕ್ರಮಗಳಲ್ಲಿ ಭಾಗಿಯಾಗಲಿದ್ದೀರಿ. ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ಮಾಡಲಿದ್ದೀರಿ. ವಾರದ ಅಂತ್ಯದಲ್ಲಿ ಸಂಬಂಧಿಕರ ಜತೆಗಿನ ಬಂಧ ಗಟ್ಟಿಯಾಗಲಿದೆ.

ಶುಭದಿನ: 7. ಸೌಂದರ್ಯ ಲಹರಿ ಪಠಿಸಿರಿ.




ಬಹಳ ಕಾಲದಿಂದ ಬಾಕಿ ಉಳಿದಿದ್ದ ಕೆಲಸಕ್ಕೆ ಸಂಬಂಧಿಸಿದ ನಿರ್ಧಾರ, ಅನುಷ್ಠಾನ ಆಗಲಿದೆ. ಆರೋಗ್ಯದ ಬಗ್ಗೆ ನಿಯಮಿತವಾದ ಕಾಳಜಿ ತೆಗೆದುಕೊಳ್ಳುವುದು ಅತ್ಯಗತ್ಯ. ವಾರದ ಮಧ್ಯ ಭಾಗದಲ್ಲಿ ಶುಭ ಸುದ್ದಿಯನ್ನು ಕೇಳಲಿದ್ದೀರಿ.

ಶುಭದಿನ: 6. ವಿಷ್ಣು ಸಹಸ್ರನಾಮ ಪಠಿಸಿರಿ.


DHEEPAM
LAMP OIL
BLEND OF 5 OILS
ದೀಪದ ಬೆಳಕಲ್ಲಿ
ಒಂದು ದೈವೀಕ
ಅನುಭವ
ಸುಗಂಧ ಸುವಾಸನೆ
ಹರಡುವ ಪಂಚ ದೀಪ ಎಣ್ಣೆ
